ಸವದತ್ತಿ ತಾಲ್ಲೂಕಿನ ಶ್ರೀ ಕ್ಷೇತ್ರ ಸೊಗಲದಲ್ಲಿ ಅತಿವೃಷ್ಟಿಯಿಂದಾದ ಅನಾಹುತಕ್ಕೆ ಸರಕಾರದಿಂದ ಹಣ ಒದಗಿಸುವ ಬಗ್ಗೆ

503. ಶ್ರೀ ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಶ್ರೀ ಕ್ಷೇತ್ರ ಸೊಗಲದಲ್ಲಿ ಭಾರಿ ಮಳೆಯಿಂದ (ಫ್ಲಡ್ ಡ್ಯಾಮೇಜ್) ಆದ ಅನಾಹುತದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಅನಾಹುತದಿಂದ (ಫ್ಲಡ್ ಡ್ಯಾಮೇಜ್) ಆದ ಹಾನಿ ಎಷ್ಟು?

ಇ) ಈ ಬಗ್ಗೆ ಕೈಗೊಂಡ ಪರಿಹಾರ ಕಾರ್ಯಕ್ರಮಗಳೇನು?

ಈ) ಈ ಕೆಲಸಕ್ಕೆ ಎಷ್ಟು ಹಣ ಖರ್ಚಾಗಿದೆ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು):–

ಅ) ಬಂದಿದೆ

ಆ) ಅಂದಾಜು ರೂ. 2.05 ಲಕ್ಷ

ಇ) ನಿಯಮಾವಳಿಗಳಡಿಯಲ್ಲಿ ಇಂತಹ ದುರಸ್ತಿ ಕಾರ್ಯಕ್ರಮ ಕೈಗೊಳ್ಳಲು ಅವಕಾಶವಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಗ್ರಾಮಾಧಿಕಾರಿಗಳ ಹುದ್ದೆಗಳು ಖಾಲಿ ಇರುವ ಬಗ್ಗೆ

502. ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಗ್ರಾಮಾಧಿಕಾರಿಗಳ ಹುದ್ದೆಗಳು ಖಾಲಿ ಇವೆ.

ಆ) ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ.

ಇ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ, ಅವು ಯಾವ ದಿನಾಂಕದಿಂದ ಖಾಲಿ ಇವೆ;

ಈ) ಬೈಲಹೊಂಗಲ ಮತ್ತು ಸವದತ್ತಿ ತಾಲ್ಲೂಕಿನಲ್ಲಿ ಎಷ್ಟು ಗ್ರಾಮಾಧಿಕಾರಿಗಳ ಖಾಲಿ ಹುದ್ದೆಗಳು ಇವೆ, ಅವು ಎಷ್ಟು ದಿವಸಗಳಿಂದ ಖಾಲಿ ಇವೆ.

ಉ) ಗ್ರಾಮಾಧಿಕಾರಿಗಳ ಹುದ್ದೆಗಳನ್ನು ತುಂಬಲು ಸರಕಾರದವರು ತೆಗೆದುಕೊಂಡ ಕ್ರಮಗಳೇನು?

ಊ) ಸ್ಟೈಪಂಡರಿ ಪದವೀಧರರನ್ನು ಗ್ರಾಮಾಧಿಕಾರಿಯೆಂದು ನೇಮಿಸಲು ಸರ್ಕಾರಕ್ಕೆ ಏನಾದರೂ ತೊಂದರೆಯಿದೆಯೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :–

ಅ) ರಾಜ್ಯದಲ್ಲಿ ಒಟ್ಟು 1754 ಗ್ರಾಮ ಲೆಕ್ಕಿಗರ ಹುದ್ದೆಗಳು ಖಾಲಿ ಇವೆ.

ಆ) ಖಾಲಿಯಿರುವ ಗ್ರಾಮ ಲೆಕ್ಕಿಗರ ಹುದ್ದೆಗಳ ಜಿಲ್ಲಾವಾರು ವಿವರ ಕೆಳಗಿನಂತಿದೆ :